1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**863/2024**

ಹೆಸರುಃ ರುದ್ರನಾಯ್ಕ ಚಾಸಾಃ 4

ತಂದೆಯ ಹೆಸರುಃ ಭೀಮನಾಯ್ಕ ಪ್ರಾಸಾ: 4

ವಯಸ್ಸುಃ 60 ವರ್ಷ

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಹಿರೇವುಡಾ ತಾಂಡ ಗ್ರಾಮ , ಚನ್ನಗಿರಿ

ಸಾಕ್ಷಿಗೆ ದಿನಾಂಕಃ 24-11-2025 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಚಾಸಾ-1 ನನ್ನ ಮಗಳು. ಚಾಸಾ-5 ನನ್ನ ಹೆಂಡತಿ, ಚಾಸಾ-6 ಮತ್ತು 7 ನಮ್ಮ ನೆರೆಹೊರೆಯವರು. ಆರೋಪಿ ಚಾಸಾ-1 ರವರ ಗಂಡ. ನನ್ನ ಅಳಿಯ.

ಸುಮಾರು 2 ವರ್ಷಗಳ ಹಿಂದೆ ಆರೋಪಿ ನನಗೆ ಹೆಂಡತಿ ಬೇಡ , ಮಕ್ಕಳು ಬೇಡ ನಾನು ಡೈವೋರ್ಸ್ ಕೊಡುತ್ತೇನೆ ಮತ್ತು ಬೇರೆ ಮದುವೆಯಾಗುತ್ತೇನೆ ಎಂದು ನಮ್ಮ ಮನೆಯ ಬಳಿ ಬಂದು ಗಲಾಟೆ ತೆಗೆದಿರುತ್ತಾನೆ. ಸದರಿ ಸಮಯಕ್ಕೆ ಚಾಸಾ-2 ಮತ್ತು 3 ರವರು ಹಾಜರಿದ್ದರು. ನಾನು ಪೊಲೀಸರಿಗೆ ಹೇಳಿಕೆ ಕೊಟ್ಟಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಹೇಳಿಕೆಯನ್ನು ನೋಡಲಾಗಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 18-01-2023 ರಂದು ಅರೋಪಿಯೊಂದಿಗೆ ಚಾಸಾ-1ರವರು ಕೊಟ್ಟು ವಿವಾಹ ಮಾಡಿದ್ದು. ಅವರ ಸಾಂಸಾರಿಕ ಜೀವನದಿಂದ ಇಬ್ಬರು ಮಕ್ಕಳು ಜನಿಸಿರುತ್ತಾರೆ ಎಂದರೆ ಸರಿ. ಕೆಲವು ದಿನಗಳ ನಂತರ ಅವರ ಸಾಂಸಾರಿಕ ಜೀವನದಲ್ಲಿ ಬಿರಕು ಬಿಟ್ಟಿದ್ದು ಚಾಸಾ1ರವರು ಮಕ್ಕಳೊಂದಿಗೆ ನಮ್ಮ ಮನೆಗೆ ಬಂದಿರುತ್ತಾರೆ ಎಂದರೆ ಸರಿ. ಅರೋಪಿ ಚಾಸಾ-1ರವರಿಂದ ವಿವಾಹ ವಿಚ್ಚೇದನ ಬೇಕೆಂದು ಚನ್ನಗಿರಿ ನ್ಯಾಯಾಲಯದಲ್ಲಿ ದಾವೆ ಹೂಡಿದ್ದು ಅದೇ ರೀತಿ ಚಾಸಾ-1ರವರು ಅರೋಪಿಯಿಂದ ಜೀವನಾಂಶ ಬೇಕು ಎಂದು ಇದೇ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಸದರಿ ದಾವೆಗಳು ವಿಚಾರಣೆಗಾಗಿ ಬಾಕಿ ಇರುವಾಗಲೇ ದಿಃ 20-11-2023 ರಂದು ಅರೋಪಿ ಚಾಸಾ-1ರವರು ಒಬ್ಬರೇ ಮನೆಯಲ್ಲಿರುವಾಗ ಸಂಜೆ 6.30 ರ ಸಮಯದಲ್ಲಿ ಏಕಾ ಏಕಿ ಅತಿಕ್ರಮ ಪ್ರವೇಶ ಮಾಡಿ ತನ್ನ ಕೈಯಲ್ಲಿ ಕಲ್ಲು ಹಿಡಿದುಕೊಂಡು ನನಗೆ ಯಾಕೆ ವಿಚ್ಚೇದನ ನೀಡುತ್ತಿಲ್ಲ ಎಂದು ಅವಾಚ್ಯವಾಗಿ ಬೈದರು ಎಂದರೆ ಸರಿ. ನಾನು ಬೇರೆ ಮದುವೆಯಾಗಬೇಕು ನನಗೆ ಸತಾಯಿಸುತ್ತಿದ್ದೀಯ ಎಂದು ಚಾಸಾ-1ರವರ ಮೈ ಮೇಲಿನ ಬಟ್ಟೆಯನ್ನು ಹಿಡಿದು ಎಳೆದಾಡಿ ಮನೆಯ ಪಡಶಾಲೆಯಲ್ಲಿ ಕೆಡವಿ ಕೈ ಕಾಲುಗಳಿಂದ ಮೈ ಕೈ ಗೆ ಹೊಡೆದ ಎಂದರೆ ಸರಿ. ಚಾಸಾ-1ರವರ ತಲೆಕೂದಲನ್ನು ಹಿಡಿದು ಎಳೆದಾಡಿ ಆಕೆಯ ಮಾನಕ್ಕೆ ಕುಂದುಟಾಗುವಂತೆ ವರ್ತಿಸಿದ ಎಂದರೆ ಸರಿ. ಅಕೆಗೆ ಜೀವಸಹಿತ ಬಿಡುವುದಿಲ್ಲ ಎಂದು ಜೀವಬೆದರಿಕೆ ಹಾಕಿದ ಎಂದರೆ ಸರಿ. ಚಾಸಾ-1 ರವರು ಕೂಗಾಡುತ್ತಿರುವಾಗ ನಾನು ಚಾಸಾ-5 ರಿಂದ 7 ರವರು ಬಂದು ಸದರಿ ಜಗಳವನ್ನು ಬಿಡಿಸಿದೆವು ಎಂದರೆ ಸರಿ. ಚಾಸಾ-1ರವರು ಗಾಯಗೊಂಡ ಕಾರಣ ಅವರನುನ ಚನ್ನಗಿರಿಯ ಸರ್ಕಾರಿ ಆಸ್ಪತ್ರೆಗೆ ಕರೆದಕೊಂಡುಹೋಗಿ ಚಿಕಿತ್ಸೆ ಕೊಡಿಸಿದೆವು ಎಂದರೆ ಸರಿ. ತದನಂತರ ಚಾಸಾ-1 ರವರು ಸದರಿ ವಿಚಾರವಾಗಿ ಅರೋಪಿ ವಿರುದ್ದ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಾಸಿದ್ದಾರೆ ಎಂದು ನಾನು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿ.

**<u>ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ –</u>**

ಸದರಿ ಹೇಳಿಕೆಯನ್ನು ಪೊಲಿಸರಿಗೆ ಚಾಸಾ-1ರವರೇ ನೀಡಿರುತ್ತಾರೆ ಎಂದರೆ ಸರಿ. ಸದರಿ ಹೇಳಿಕೆಗೆ ನನ್ನ ಹೆಸರನ್ನು ಪೊಲೀಸರು ಬರೆದುಕೊಂಡಿರುತ್ತಾರೆ ಎಂದರೆ ಸರಿ. ಹಾಗಾಗಿ

ಸದರಿ ಪ್ರಕರಣ ಕುರಿತು ನನಗೆ ಯಾವುದೇ ವೈಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ಸದರಿ ಗಲಾಟೆ ಯಾವ ದಿನಾಂಕದಂದು ನಡೆಯಿತು ಎಂದು ನನಗೆ ನಿರ್ದಿಷ್ಟವಾಗಿ ಹೇಳಲಾಗುವುದಿಲ್ಲ. ನಾನು ನನ್ನ ಹೇಳಿಕೆಯನ್ನು ಯಾವ ದಿನಾಂಕದಂದು ಯಾರ ಮುಂದೆ ನೀಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಚಾಸಾ-1ರವರು ಮಾನ್ಯ ಹಿರಿಯ ಸಿವಿಲ್ ನ್ಯಾಯಾಲಯಲ್ಲಿ ವಿವಾಹ ವಿಚ್ಛೇದನ ಪ್ರಕರಣವಾದ ಎಂ ಸಿ ನಂ 14/2021ರಲ್ಲಿ ಪಾಟೀ ಸವಾಲು ಆದ ನಂತರ ಅದೇ ದಿನ ಸದರಿ ವಿಚಾರವನ್ನು ಮನಸ್ಸಿನಲ್ಲಿ ಇಟ್ಟುಕೊಂಡು ಆರೋಪಿಯ ವಿರುದ್ಧ ಪ್ರಸ್ತುತ ಪ್ರಕರಣವನ್ನು ದಾಖಲಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

**ಮರು ವಿಚಾರಣೆ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**.863/2024**

ಹೆಸರುಃ ಹೆಚ್ ಜೆ ಹರೀಶ್ ಕುಮಾರ್ ಚಾಸಾಃ 3

ತಂದೆಯ ಹೆಸರುಃ ಎಸ್ ಗುಂಡಾನಾಯ್ಕ ಪ್ರಾಸಾ: 3

ವಯಸ್ಸುಃ 31 ವರ್ಷ

ಉದ್ಯೋಗಃ ಕೂಲಿ ಕೆಲಸ

ವಾಸ ಸ್ಥಳಃ ಹಿರೇವುಡಾ ತಾಂಡ ಗ್ರಾಮ , ಚನ್ನಗಿರಿ

ಸಾಕ್ಷಿಗೆ ದಿನಾಂಕಃ 24-11-2025 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಕೃತ್ಯ ನಡೆದ ಸ್ಥಳ ಮಹಜರಾಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು. ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ. ಯಾರು ಯಾವ ಕಾರಣಕ್ಕಾಗಿ ಬರೆದರು ಎಂದು ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ಪೊಟೋದಲ್ಲಿ ನಾನು ಇದ್ದೆನೆ. ಸದರಿ ಪೊಟೋವನ್ನು ನಿಪಿ-2 ರ ಸಮಯದಲ್ಲಿ ತೆಗೆಯಲಾಗಿದ್ದು, ಅವುಗಳನ್ನು ಈಗಾಗಲೇ ನಿಪಿ-3 ಮತ್ತು 4 ಎಂದು ಗುರುತಿಸಲಾಗಿದೆ.

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್**

**ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 22-11-2023 ರಂದು ನನಗೆ ಮತ್ತು ಚಾಸಾ-2 ರವರನ್ನು ಸ್ಥಳ ಪಂಚನಾಮೆ ಜರುಗಿಸಲು ಮಹಜರು ಸಾಕ್ಷಿದಾರರಾಗಿ ಸಹಕರಿಸುವಂತೆ ಪೊಲೀಸರು ಕೋರಿಕೊಂಡರು ಎಂದರೆಸ ರಿಯಲ್ಲ. ಸದರಿ ದಿನದಂದು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಪಿ-2 ರಂತೆ ಮಹಜರನ್ನು ಬೆಳಿಗ್ಗೆ 11.00 ರಿಂದ 12.00 ರವರೆಗೂ ಪಂಚನಾಮೆ ಜರುಗಿಸಿದ್ದು ಅದಕ್ಕೆ ನಮ್ಮ ಸಹಿ ಪಡೆದರು ಎಂದರೆ ಸರಿಯಲ್ಲ, ಸದರಿ ಸಮಯಕ್ಕೆ ಚಾಸಾ-1ರವರು ಹಾಜರುಪಡಿಸಿದ ಕಲ್ಲನ್ನು ಮುಂದಿನ ತನಿಖೆಗಾಗಿ ಪೊಲೀಸರು ವಶಕ್ಕೆ ಪಡೆದರು ಎಂದರೆ ಸರಿಯಲ್ಲ. ಸದರಿ ಕಲ್ಲನ್ನು ಈಗಾಗಲೇ ಮು.ಮಾ-1 ಎಂದು ಗುರುತಿಸಲಾಗಿದೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರಗಳನ್ನು ಓದಿಹೇಳಿದತರುವಾಯ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ –**

ನಿಪಿ-2ರ ದಿನಾಂಕ ನನಗೆ ಗೊತ್ತಿಲ್ಲ. ನಿಪಿ-3 ಮತ್ತು 4 ನ್ನು ಪೊಲೀಸರು ತಮ್ಮ ಮೊಬೈಲ್ ನಲ್ಲಿ ತೆಗೆದಿರುತ್ತಾರೆ. ನಾನು ನಿಪಿ-2 ಕ್ಕೆ ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**.863/2024**

ಹೆಸರುಃ ಪರಮೇಶ್ವರ ನಾಯ್ಕ ಚಾಸಾಃ 2

ತಂದೆಯ ಹೆಸರುಃ ಭೀಮನಾಯ್ಕ ಪ್ರಾಸಾ: 2

ವಯಸ್ಸುಃ 64 ವರ್ಷ

ಉದ್ಯೋಗಃ ಗಾರೆಕೆಲಸ

ವಾಸ ಸ್ಥಳಃ ಹಿರೇವುಡಾ ತಾಂಡ ಗ್ರಾಮ , ಚನ್ನಗಿರಿ

ಸಾಕ್ಷಿಗೆ ದಿನಾಂಕಃ 24-11-2025 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆ ಕೃತ್ಯ ನಡೆದ ಸ್ಥಳ ಮಹಜರಾಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು. ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ. ಯಾರು ಯಾವ ಕಾರಣಕ್ಕಾಗಿ ಬರೆದರು ಎಂದು ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ಫೊಟೋದಲ್ಲಿ ನಾನು ಇದ್ದೆನೆ. ಸದರಿ ಫೊಟೋವನ್ನು ನಿಪಿ-2 ರ ಸಮಯದಲ್ಲಿ ತೆಗೆಯಲಾಗಿದ್ದು, ಅವುಗಳನ್ನು ಈಗಾಗಲೇ ನಿಪಿ3 ಮತ್ತು 4 ಎಂದು ಗುರುತಿಸಲಾಗಿದೆ.

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್**

**ಗೆ ಪ್ರತಿಕೂಲ ಸಾಕ್ಷ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 22-11-2023 ರಂದು ನನಗೆ ಮತ್ತು ಚಾಸಾ-3ರವರನ್ನು ಸ್ಥಳ ಪಂಚನಾಮೆ ಜರುಗಿಸಲು ಮಹಜರು ಸಾಕ್ಷಿದಾರರಾಗಿ ಸಹಕರಿಸುವಂತೆ ಪೊಲೀಸರು ಕೋರಿಕೊಂಡರು ಎಂದರೆಸ ರಿಯಲ್ಲ. ಸದರಿ ದಿನದಂದು ನನ್ನ ಹಾಗೂ ಚಾಸಾ-3ರವರು ಸಮಕ್ಷಮ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಪಿ-2 ರಂತೆ ಮಹಜರನ್ನು ಬೆಳಿಗ್ಗೆ 11.00 ರಿಂದ 12.00 ರವರೆಗೂ ಪಂಚನಾಮೆ ಜರುಗಿಸಿದ್ದು ಅದಕ್ಕೆ ನಮ್ಮ ಸಹಿ ಪಡೆದರು ಎಂದರೆ ಸರಿಯಲ್ಲ, ಸದರಿ ಸಮಯಕ್ಕೆ ಚಾಸಾ-1ರವರು ಹಾಜರುಪಡಿಸಿದ ಕಲ್ಲನ್ನು ಮುಂದಿನ ತನಿಖೆಗಾಗಿ ಪೊಲೀಸರು ವಶಕ್ಕೆ ಪಡೆದರು ಎಂದರೆ ಸರಿಯಲ್ಲ. ಸದರಿ ಕಲ್ಲನ್ನು ಈಗಾಗಲೇ ಮು.ಮಾ-1 ಎಂದು ಗುರುತಿಸಲಾಗಿದೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರಗಳನ್ನು ಓದಿಹೇಳಿದತರುವಾಯ ನಿಪಿ-2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ –**

ನಿಪಿ-2ರ ದಿನಾಂಕ ನನಗೆ ಗೊತ್ತಿಲ್ಲ. ನಿಪಿ-3 ಮತ್ತು 4 ನ್ನು ಪೊಲೀಸರು ತಮ್ಮ ಮೊಬೈಲ್ ನಲ್ಲಿ ತೆಗೆದಿರುತ್ತಾರೆ. ನಾನು ನಿಪಿ-2 ಕ್ಕೆ ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆಎಂಎಫ್ ಸಿ, ಚನ್ನಗಿರಿ.**

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**.863/2024**

ಹೆಸರುಃ ವನಜಾಕ್ಷಿ ಚಾಸಾಃ 1

ಗಂಡಃ ಲೋಹಿತ್ ಕುಮಾರ್ ಪ್ರಾಸಾ: 1

ವಯಸ್ಸುಃ 28 ವರ್ಷ

ಉದ್ಯೋಗಃ ಗೃಹಿಣಿ

ವಾಸ ಸ್ಥಳಃ ಹಿರೇವುಡಾ ತಾಂಡ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 04-04-2025 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಚಾಸಾ 4 ಮತ್ತು 5 ನನ್ನ ತಂದೆ ತಾಯಿ, ಚಾಸಾ 6 ಮತ್ತು 7 ನನ್ನ ಗ್ರಾಮಸ್ಥರು. ಆರೋಪಿ ನನ್ನ ಗಂಡ. ದಿಃ 20-11-2023 ರಂದು ನಾನು ಹಾಗೂ ನನ್ನ ತಂದೆ ಚಾಸಾ 4 ರವರು ವಿವಾಹ ವಿಚ್ಛೇದನ ಪ್ರಕರಣದ ವಿಚಾರಣೆಯನ್ನು ಮುಗಿಸಿಕೊಂಡು ಮನೆಗೆ ಹಿಂದಿರುಗಿದಾಗ ಸಂಜೆ 6-30 ರ ಸಮಯಕ್ಕೆ ಆರೋಪಿಯು ಮನೆಗೆ ಬಂದು ನನಗೆ ವಿಚ್ಛೇದನಾ ಬೇಕು ಕೊಡು ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ , ಕೈಯಿಂದ ನನಗೆ ಹೊಡೆದು, ಮೈಮೇಲಿದ್ದ ಬಟ್ಟೆಯನ್ನು ಹರಿದಿರುತ್ತಾರೆ. ಆಗ ಮನೆಯಲ್ಲಿ ಯಾರು ಇರಲಿಲ್ಲ. ಚಾಸಾ 5 ರವರು ಕೆಲಸದಿಂದ ಬಂದು ನನ್ನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ. ನಂತರ ಚಿಕಿತ್ಸೆ ಪಡೆದು ಮಾರನೇ ದಿನ ದೂರನ್ನು ಸಲ್ಲಿಸಿರುತ್ತೇನೆ. ಆರೋಪಿ ಜೀವ ಸಹಿತ ಬಿಡುವುದಿಲ್ಲ ಕೊಲೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿರುತ್ತಾರೆ. ಕಲ್ಲಿನಿಂದ ನನಗೆ ಹೊಡೆದಿರುತ್ತಾರೆ. ಸಾಕ್ಷಿಯು ಈಗ ಒಂದು ದಾಖಲೆಯನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದೂರನ್ನು ನಿಶಾನೆ.ಪಿ.1 ಎಂದು

ಗುರುತಿಸಲಾಯಿತು. ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು .

ದಿನಾಂಕಃ 21-11-2023 ರಂದು ನಾನು ತೋರಿಸಿದ ಸ್ಥಳದಲ್ಲಿ ಪೊಲೀಸರು ನನ್ನ ,ಚಾಸಾ 2 ಮತ್ತು 3 ರವರ ಸಮಕ್ಷಮ ನಿ.ಪಿ. 2 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ. ನನ್ನ ಜೊತೆ ಚಾಸಾ 2 ಮತ್ತು 3 ರವರು ಸಹಿ ಮಾಡಿರುತ್ತಾರೆ. ಸಾಕ್ಷಿಯು ಈಗ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಮಹಜರ್ ನ್ನು ನಿಶಾನೆ.ಪಿ.2 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ.2 (ಎ) ಎಂದು ಗುರುತಿಸಲಾಯಿತು.

ಮಹಜರ್ ಸಮಯದಲ್ಲಿ ಪೊಲೀಸರು ಎರಡು ಭಾವಚಿತ್ರವನ್ನು ತೆಗೆದಿರುತ್ತಾರೆ . ಸದರಿ ಭಾವಚಿತ್ರವನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ . ಸದರಿ ಭಾವಚಿತ್ರವನ್ನು ನಿಪಿ.3 ಮತ್ತು 4 ಎಂದು ಗುರುತಿಸಲಾಯಿತು . ಮಹಜರ್ ಸಮಯದಲ್ಲಿ ಪೊಲೀಸರ ನಾನು ಹಾಜರುಪಡಿಸಿದ ಒಂದು ಕಲ್ಲನ್ನು ವಶಪಡಿಸಿಕೊಂಡಿರುತ್ತಾರೆ . ಸದರಿ ಕಲ್ಲನ್ನು ಸಾಕ್ಷಿಯು ನೋಡಿ ಗುರುತಿಸಿದ್ದರಿಂದ ಮು.ಮಾಲು ಸಂಃ 1 ಎಂದು ಗುರುತಿಸಲಾಯಿತು.

ನನ್ನ ಮೇಲೆ ಹಲ್ಲೆ ಮಾಡಿದ ಆರೋಪಿ ನ್ಯಾಯಾಲಯದಲ್ಲಿದ್ದು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ದೂರು ಮತ್ತು ಮಹಜರ್ ಗೆ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ದೂರು ಮತ್ತು ಮಹಜರ್ ನ್ನು ನೋಡಲಾಗಿ ಸಾಕ್ಷಿಯು ದೂರು ಮತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ಆರೋಪಿ ಅಕ್ರಮ ಪ್ರವೇಶ ಮಾಡಿ ಕೈಯಲ್ಲಿ ಕಲ್ಲನ್ನು ಹಿಡಿದುಕೊಂಡು ಬಂದಿರುತ್ತಾರೆ ಎಂದರೆ ಸರಿ . ನಂತರ ನನ್ನನ್ನು ಮನೆಯೊಳಗಿನಿಂದ ಪಡಸಾಲೆಗೆ ಎಳೆದುಕೊಂಡು ಬಂದು ಕೈ ಕಾಲುಗಳಿಂದ ಹಲ್ಲೆ ಮಾಡಿರುತ್ತಾರೆ ಎಂದರೆ ಸರಿ . ಬೆರಳುಗಳನ್ನು ಸಹ ತಿರುವಿ ನೋವುಂಟು ಮಾಡಿರುತ್ತಾರೆ ಎಂದರೆ ಸರಿ . ಮೈಮೇಲಿನ ಬಟ್ಟೆಗಳನ್ನು ಹಿಡಿದು ಎಳೆದು ಹರಿದು ಸಾರ್ವಜನಿಕವಾಗಿ ಅವಮಾನಪಡಿಸಿರುತ್ತಾರೆ ಎಂದರೆ ಸರಿ . ದಿಃ 22-11-2023 ರಂದು ಪೊಲೀಸರು ಮಹಜರ್ ಗೆ ಬಂದಿರುತ್ತಾರೆ ಎಂದರೆ ಸರಿ . ಬೆಳಗ್ಗೆ 11-00 ಗಂಟೆಯಿಂದ 12.00 ಗಂಟೆಯವರೆಗೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿ .

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ –**

ದಿಃ 20-11-2023 ರಂದು ಮಾನ್ಯ ಹಿರಿಯ ಸಿವಿಲ್ ನ್ಯಾಯಾಲಯ ಚನ್ನಗಿರಿಯಲ್ಲಿ ಎಂ ಸಿ ನಂಃ 14/2021 ರ ವಿಚಾರಣೆ ಇತ್ತು ಎಂದರೆ ಸರಿ . ವಿವಾಹ ವಿಚ್ಛೇದನ ಅರ್ಜಿ ಸಲ್ಲಿಕೆಯ ನಂತರ ನಾನು ಆರೋಪಿಯ ಮನೆಗೆ ಹೋಗಿರುವುದಿಲ್ಲ ಎಂದರೆ ಸರಿಯಲ್ಲ, ಸಾಕ್ಷಿಯು ಮುಂದುವರೆದು ನಾನು ಹಲವಾರು ಬಾರಿ ಹೋಗಿರುತ್ತೇನೆ ಎಂದು ನುಡಿಯುತ್ತಾರೆ. ದಿಃ 20-11-2023 ರ ವಿಚಾರಣೆಯಲ್ಲಿ ನಾನು ಆರೋಪಿಯ ಮನೆಗೆ ಹೋಗಿರುವುದಿಲ್ಲ ಎಂದು ನುಡಿದಿರುತ್ತೇನೆ ಎಂದರೆ ಸರಿಯಲ್ಲ. ದಿಃ 18-09-2022 ರಂದು ಆರೋಪಿಯಿಂದ ಮದುವೆಯ ಕಾಲಕ್ಕೆ ನಾವು ನೀಡಿದ್ದ ಎಲ್ಲಾ ವಸ್ತುಗಳನ್ನು ವಾಪಾಸ್ ಪಡೆದಿರುತ್ತೇನೆ ಎಂದು ಎಂ ಸಿ ಪ್ರಕರಣದಲ್ಲಿ ಮೆಮೋ ಸಲ್ಲಿಸಿರುತ್ತೇವೆ.

ಮುಂದುವರೆದ ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಲಾಯಿತು.

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**